# CMR NEP SEMINAR 2020

**Publication: Eesanje**
**Date : 07-09-2021**

# ರಾಷ್ಟ್ರೀಯ ಶಿಕ್ಷಣ ನೀತಿ ಅನುಷ್ಠಾನಕ್ಕೆ ರಾಜ್ಯ ಸಜ್ಜು

**ಬೆಂಗಳೂರು,ಸೆ.7-** ವಿದ್ಯಾಭಾರತಿ ಕರ್ನಾಟಕ ಮತ್ತು ಸಿ.ಎಂ.ಆರ್ ಸಮೂಹ ಶಿಕ್ಷಣ ಸಂಸ್ಥೆಗಳ ಸಹಯೋಗದಲ್ಲಿ ಕರ್ನಾಟಕದ ಶಾಲಾ ಶಿಕ್ಷಣದಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ-2020ರ ಅನುಷ್ಠಾನ-ಅವಕಾಶಗಳು ಹಾಗೂ ಕಾರ್ಯತಂತ್ರಗಳು ವಿಷಯ ಕುರಿತ ಎರಡು ದಿನದ ವಿಚಾರ ಸಂಕಿರಣ ಹಮ್ಮಿಕೊಳ್ಳಲಾಗಿತ್ತು .

ನಗರದ ಸಿ.ಎಂ.ಆರ್ ತಾಂತ್ರಿಕ ಮಹಾವಿದ್ಯಾಲಯದ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ವಿಚಾರ ಸಂಕಿರಣ ಕಾರ್ಯಕ್ರಮವನ್ನು ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವ ಬಿ.ಸಿನಾಗೇಶ್ ಉದ್ಘಾಟಿಸಿ ಮಾತನಾಡಿ, ಕೇಂದ್ರ ಸರ್ಕಾರದ ಹೊಸ ರಾಷ್ಟ್ರೀಯ ಶಿಕ್ಷಣ ನೀತಿಯ ಅನುಷ್ಠಾನಕ್ಕೆ ಕರ್ನಾಟಕ ಸರ್ಕಾರ ಸಜ್ಜಾಗಿದ್ದು, ಈ ನಿಟ್ಟಿನಲ್ಲಿ ಕಾರ್ಯೋನ್ಮುಕರಾಗಿದ್ದೇವೆ ಎಂದರು.

ರಾಷ್ಟ್ರೀಯ ಶಿಕ್ಷಣ ನೀತಿ ಜಾರಿಗೆ ಪೂರಕವಾಗಿ ರಾಜ್ಯದ ಶಿಕ್ಷಣ ತಜ್ಞರು, ಶಿಕ್ಷಣ ಸಂಸ್ಥೆಗಳು ಸೇರಿದಂತೆ ಅನೇಕ ಸಂಘ-ಸಂಸ್ಥೆಗಳಿಂದ ಮಾಹಿತಿ, ಸಲಹೆಗಳ ಸಂಗ್ರಹಕ್ಕೆ ಮುಂದಾಗಿದ್ದು, ರಾಜ್ಯದ ಸಮಗ್ರ ಸಲಹೆಗಳನ್ನು ಕೇಂದ್ರಕ್ಕೆ ಕಳುಹಿಸುವ ಅಮೂಲಾಗ್ರ ಕೆಲಸವನ್ನು ರಾಜ್ಯದ ಶಿಕ್ಷಣ ಸಚಿವನಾಗಿ ಮಾಡುತ್ತೇನೆ. ಈ ನಿಟ್ಟಿನಲ್ಲಿ ರಾಜ್ಯದ ಶಿಕ್ಷಣ ತಜ್ಞರ ಸಲಹೆ, ಸಹಕಾರವನ್ನು ಬಯಸುತ್ತೇನೆ ಎಂದು ತಿಳಿಸಿದರು.

ರಾಜ್ಯಸಭಾ ಸದಸ್ಯರು ಹಾಗೂ ಸಿ.ಎಂ.ಆರ್ ಸಮೂಹ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷ ಕೆ.ಸಿ. ರಾಮಮೂರ್ತಿ ಮಾತನಾಡಿ,



ಇದುವರೆಗೂ ಇಡೀ ದೇಶಕ್ಕೆ ಸಂಬಂಧಪಟ್ಟಂತಹ ಏಕರೂಪದ ಶಿಕ್ಷಣ ನೀತಿ ಇರಲಿಲ್ಲ. ಈ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ದೇಶದ ಆರ್ಥಿಕ, ಸಾಮಾಜಿಕ ಅನುಗುಣವಾಗಿ ಹೊಸ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ರೂಪಿಸಲು ಮುಂದಾಗಿದ್ದು ಈ ಹೊಸ ಶಿಕ್ಷಣ ನೀತಿ ಗ್ರಾಮೀಣ ಮತ್ತು ನಗರ ಶಿಕ್ಷಣದಲ್ಲಿ ಸಮನ್ವಯತೆ ಮತ್ತು ಸಮಗ್ರತೆಯನ್ನು ರೂಪಿಸಲು ಸಹಕಾರಿಯಾಗಲಿದೆ ಎಂದರು.

ಪ್ರೊ. ಎಂ.ಕೆ.ಶ್ರೀಧರ್, ವಿದ್ಯಾಭಾರತ ರಾಷ್ಟ್ರೀಯ ಅಧ್ಯಕ್ಷ ದೂಸಿ ರಾಮಕೃಷ್ಣ ರಾವ್ ಸೇರಿದಂತೆ ಹಲವು ಗಣ್ಯರು ಪಾಲ್ಗೊಂಡಿದ್ದರು.

Tue, 07 September 2021
https://epaper.eesanje.com/c/62971174

**Publication: Vijaya Karnataka**
**Date : 07-09-2021**

## ಕಾರ್ಯಾಗಾರ ಉದ್ಘಾಟಿಸಿದ ಸಚಿವ ಬಿ.ಸಿ ನಾಗೇಶ್ ಘೋಷಣೆ

# ಎನ್‌ಇಪಿ ಜಾರಿಗೆ ಟಾಸ್ಕ್‌ಫೋರ್ಸ್ ರಚನೆ

■ **ವಿಕ ಸುದ್ದಿಲೋಕ** ಮಹದೇವಪುರ

ಪ್ರಾಥಮಿಕ ಶಿಕ್ಷಣದಲ್ಲಿ ನೂತನ ರಾಷ್ಟ್ರೀಯ ಶಿಕ್ಷಣ ನೀತಿ (ಎನ್‌ಇಪಿ) ಜಾರಿಗೆ ಸಂಬಂಧಿಸಿದಂತೆ ಸಮಗ್ರ ರೂಪ ನೀಡಲು ಶೀಘ್ರ "ಕಾರ್ಯಪಡೆ (ಟಾಸ್ಕ್‌ಫೋರ್ಸ್) ರಚನೆ ಮಾಡಲಾಗುವುದು ಎಂದು ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವ ಬಿ.ಸಿ ನಾಗೇಶ್ ಹೇಳಿದರು.

ವಿದ್ಯಾಭಾರತಿ ಕರ್ನಾಟಕ ಮತ್ತು ಸಿಎಂಆರ್ ಸಮೂಹ ಶಿಕ್ಷಣ ಸಂಸ್ಥೆಗಳ ಸಹಯೋಗದಲ್ಲಿ ಹಮ್ಮಿಕೊಂಡಿದ್ದ "ಕರ್ನಾಟಕದ ಶಾಲಾ ಶಿಕ್ಷಣದಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ-2020ರ ಅನುಷ್ಠಾನ- ಅವಕಾಶಗಳು ಹಾಗೂ ಕಾರ್ಯತಂತ್ರದ ಕಾರ್ಯಾಗಾರ" ಉದ್ಘಾಟಿಸಿ ಅವರು ಮಾತನಾಡಿದರು. "ಶಿಕ್ಷಣ ತಜ್ಞರ ಮತ್ತು ಶಿಕ್ಷಣ ನೀತಿಯ ಕಾರ್ಯಪಡೆಯ ಸಲಹೆ, ಸೂಚನೆಗಳ ಮೇರೆಗೆ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಹಂತ ಹಂತವಾಗಿ ಅನುಷ್ಠಾನಕ್ಕೆ ತಂದು ಶಿಕ್ಷಣ ಪದ್ಧತಿಯಲ್ಲಿ ಪ್ರಗತಿ ಸಾಧಿಸಲಾಗುವುದು. ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಅನುಷ್ಠಾನಕ್ಕೆ ತಂದ



ಕಾರ್ಯಾಗಾರವನ್ನು ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವ ಬಿ.ಸಿ ನಾಗೇಶ್ ಉದ್ಘಾಟಿಸಿದರು. ಕೆ.ಸಿ ರಾಮಮೂರ್ತಿ, ತಿಪ್ಪೇಸ್ವಾಮಿ ಮತ್ತಿತರರು ಇದ್ದರು.

ಮೊದಲ ರಾಜ್ಯ ಕರ್ನಾಟಕವಾಗಲಿದೆ ಇದಕ್ಕೆ ಬೇಕಾದ ತಯಾರಿ ಸರಕಾರದಿಂದ ನಡೆಯುತ್ತಿದೆ," ಎಂದರು.

ವಿದ್ಯಾಭಾರತಿ ರಾಷ್ಟ್ರೀಯ ಅಧ್ಯಕ್ಷ ದೂಸಿ ರಾಮಕೃಷ್ಣ ರಾವ್ "ಎನ್‌ಇಪಿ ಅನುಷ್ಠಾನದಲ್ಲಿ ಶಿಕ್ಷಕರ ಪಾತ್ರ ಮಹತ್ವದ್ದಾಗಿದೆ. ಮಕ್ಕಳಿಗೆ ಅರ್ಥವಾಗುವ ರೀತಿಯಲ್ಲಿ ಬೋಧನೆ ಮಾಡಿದಾಗ ಮಾತ್ರ ನೀತಿಗೆ ಉತ್ತಮ ಸ್ಪಂದನೆ ಸಿಗಲಿದೆ," ಎಂದರು. ರಾಷ್ಟ್ರೀಯ ಶಿಕ್ಷಣ ನೀತಿ ಸಲಹಾ ಸಮಿತಿ ಸದಸ್ಯ ಮತ್ತು ವಿಶ್ವವಿದ್ಯಾಲಯ ಅನುದಾನ ಆಯೋಗ ಸದಸ್ಯ ಪ್ರೊ.ಎಂ.ಕೆ ಶ್ರೀಧರ್ "ರಾಷ್ಟ್ರೀಯ ಶಿಕ್ಷಣ ನೀತಿಯನ್ನು ವೈಜ್ಞಾನಿಕವಾಗಿ ಅನುಷ್ಠಾನಗೊಳಿಸಬೇಕು," ಎಂದರು. ರಾಜ್ಯಸಭಾ ಸದಸ್ಯ ಹಾಗೂ ಸಿಎಂಆರ್ ಶಿಕ್ಷಣ ಸಮೂಹ ಸಂಸ್ಥೆ ಅಧ್ಯಕ್ಷ ಕೆ.ಸಿ ರಾಮಮೂರ್ತಿ, ಪಿಯು ಶಿಕ್ಷಣ ತಜ್ಞ ತಿಪ್ಪೇಸ್ವಾಮಿ, ವಿದ್ಯಾಭಾರತಿ ಕರ್ನಾಟಕ ಅಧ್ಯಕ್ಷ ಪರಮೇಶ್ವರ ಹೆಗಡೆ ಮತ್ತಿತರರು ಇದ್ದರು.

**Publication: Vishwa vaaradhi**

**Date : 07-09-2021**




## ಎರಡು ದಿನದ ವಿಚಾರ ಸಂಕಿರಣ

ವಿಶ್ವವಾರಿಧಿ । ಬೆಂಗಳೂರು

ವಿದ್ಯಾಭಾರತಿ ಕರ್ನಾಟಕ ಮತ್ತು ಸಿ.ಎಂ.ಆರ್ ಸಮೂಹ ಶಿಕ್ಷಣ ಸಂಸ್ಥೆಗಳು ಇವರ ಸಹಯೋಗದಲ್ಲಿ ನಗರದ ಸಿ.ಎಂ.ಆರ್ ತಾಂತ್ರಿಕ ಮಹಾವಿದ್ಯಾಲಯದ ಸಭಾಂಗಣದಲ್ಲಿ "ಕರ್ನಾಟಕ ಶಾಲಾ ಶಿಕ್ಷಣದಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ–2020ರ ಅನುಷ್ಠಾನ–ಅವಕಾಶಗಳು ಹಾಗೂ ಕಾರ್ಯತಂತ್ರಗಳು" ವಿಷಯ ಕುರಿತಂತೆ ಮೊದಲ ದಿನದ ವಿಚಾರ ಸಂಕಿರಣ ಜರುಗಿತು.

ವಿಚಾರ ಸಂಕಿರಣವನ್ನು ಸಚಿವ ಬಿ.ಸಿ ನಾಗೇಶ್ ಅವರು ಉದ್ಘಾಟಿಸಿದರು. ವಿಚಾರ ಸಂಕಿರಣದ ದಿಕ್ಸೂಚಿ ಭಾಷಣಕಾರರಾಗಿ ಪ್ರೊ. ಎಂ.ಕೆ.ಶ್ರೀಧರ್, (ಸದಸ್ಯರು,ರಾಷ್ಟ್ರೀಯ ಶಿಕ್ಷಣ ನೀತಿ ಸಲಹಾ ಸಮಿತಿ ಮತ್ತು ಸದಸ್ಯರು, ವಿಶ್ವವಿದ್ಯಾಲಯ ಅನುದಾನ ಆಯೋಗ) ಭಾಗವಹಿಸಿದ್ದರು. ವಿಚಾರ ಸಂಕಿರಣದ ಅಧ್ಯಕ್ಷತೆಯನ್ನು ಶ್ರೀ ದೂಸಿ ರಾಮಕೃಷ್ಣ ರಾವ್, ರಾಷ್ಟ್ರೀಯ ಅಧ್ಯಕ್ಷರು, ವಿದ್ಯಾಭಾರತಿ ಇವರು ವಹಿಸಿದ್ದರು. ವಿಚಾರ ಸಂಕಿರಣದ ಮುಖ್ಯ ಅತಿಥಿಗಳಾಗಿ ಶ್ರೀ ಕೆ.ಸಿ.ರಾಮಮೂರ್ತಿ ರಾಜ್ಯಸಭಾ ಸದಸ್ಯರು ಹಾಗೂ ಅಧ್ಯಕ್ಷರು ಸಿ.ಎಂ. ಆರ್ ಶಿಕ್ಷಣ ಸಮೂಹ ಸಂಸ್ಥೆಗಳು ಇವರು ಭಾಗವಹಿಸಿದ್ದರು.

ವಿಚಾರ ಸಂಕಿರಣವನ್ನು ಉದ್ಘಾಟಿಸಿ ಮಾತನಾಡಿದ ಕರ್ನಾಟಕ ಸರ್ಕಾರದ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರಾದ ಶ್ರೀ ಬಿ.ಎಸ್ ನಾಗೇಶ್ ರವರು ಕೇಂದ್ರ ಸರ್ಕಾರದ ಹೊಸ ರಾಷ್ಟ್ರೀಯ ಶಿಕ್ಷಣ ನೀತಿಯ ಅನುಷ್ಠಾನಕ್ಕೆ ಕರ್ನಾಟಕ ಸರ್ಕಾರ ಸಜ್ಜಾಗಿದ್ದು ಈ ನಿಟ್ಟಿನಲ್ಲಿ ಕಾರ್ಯನ್ಮೋಕರಾಗಿದ್ದೇವೆ ಎಂದರು. ರಾಷ್ಟ್ರೀಯ ಶಿಕ್ಷಣ ನೀತಿ ಜಾರಿಗೆ ಪೂರಕವಾಗಿ ರಾಜ್ಯದ ಶಿಕ್ಷಣ ತಜ್ಞರು, ಶಿಕ್ಷಣ ಸಂಸ್ಥೆಗಳು ಸೇರಿದಂತೆ ಅನೇಕ ಸಂಘ–ಸಂಸ್ಥೆಗಳಿಂದ ಮಾಹಿತಿ, ಸಲಹೆಗಳ ಸಂಗ್ರಹಕ್ಕೆ ಮುಂದಾಗಿದ್ದು, ರಾಜ್ಯದ ಸಮಗ್ರ ಸಲಹೆಗಳನ್ನು ಕೇಂದ್ರಕ್ಕೆ ಕಳುಹಿಸುವ ಅಮೂಲಾಗ್ರ ಕೆಲಸವನ್ನು ರಾಜ್ಯದ ಶಿಕ್ಷಣ ಸಚಿವನಾಗಿ ಮಾಡುತ್ತೇನೆ. ಈ ನಿಟ್ಟಿನಲ್ಲಿ ರಾಜ್ಯದ ಶಿಕ್ಷಣ ತಜ್ಞರ ಸಲಹೆ, ಸಹಕಾರವನ್ನು ಬಯಸುತ್ತೇನೆ ಎಂದು ತಿಳಿಸಿದರು.

ವಿಚಾರ ಸಂಕಿರಣದ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ರಾಜ್ಯಸಭಾ ಸದಸ್ಯರು ಹಾಗೂ ಸಿ.ಎಂ.ಆರ್ ಸಮೂಹ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷರಾದ ಶ್ರೀ ಕೆ.ಸಿ ರಾಮಮೂರ್ತಿಯವರು ಮಾತನಾಡಿ ಇದುವರೆಗೂ ಇಡೀ ದೇಶಕ್ಕೆ ಸಂಬಂಧಪಟ್ಟಂತಹ ಏಕರೂಪದ ಶಿಕ್ಷಣ ನೀತಿ ಇರಲಿಲ್ಲ. ಈ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ದೇಶದ ಆರ್ಥಿಕ, ಸಾಮಾಜಿಕ ಅನುಗುಣವಾಗಿ ಹೊಸ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ರೂಪಿಸಲು ಮುಂದಾಗಿದ್ದು ಈ ಹೊಸ ಶಿಕ್ಷಣ ನೀತಿ ಗ್ರಾಮೀಣ ಮತ್ತು ನಗರ ಶಿಕ್ಷಣದಲ್ಲಿ ಸಮನ್ವಯತೆ ಮತ್ತು ಸಮಗ್ರತೆಯನ್ನು ರೂಪಿಸಲು ಸಹಕಾರಿಯಾಗಲಿದೆ ಎಂದರು. ರಾಷ್ಟ್ರೀಯ ಶಿಕ್ಷಣ ನೀತಿಯನ್ನು ರೂಪಿಸುವ ಧ್ಯೇಯ ಪ್ರತಿಯೊಬ್ಬ ನಾಗರೀಕರ ಜವಾಬ್ದಾರಿಯಾಗಬೇಕು. ಈ ನಿಟ್ಟಿನಲ್ಲಿ ವಿದ್ಯಾಭಾರತಿ ಸಂಸ್ಥೆಯು ಸಹಯೋಗದಲ್ಲಿ ನಮ್ಮ ವಿದ್ಯಾಸಂಸ್ಥೆಯಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿಯ ಅನುಷ್ಠಾನ ಕುರಿತಂತೆ ವಿಚಾರ ಸಂಕಿರಣ ನಡೆಯುತ್ತಿರುವುದು ಅತ್ಯಂತ ಸಂತೋಷದ ವಿಚಾರ ಎಂದರು.

**Publication: Hosa Digantha**

**Date:** **07-09-2021**

## ಎನ್‌ಇಪಿ ಜಾರಿ: ಸರ್ಕಾರ ಕಾರ್ಯೋನ್ಮುಖ

**ಬೆಂಗಳೂರು/ಮಹದೇವಪುರ:** ನೂತನ ರಾಷ್ಟ್ರೀಯ ಶಿಕ್ಷಣ ನೀತಿ (ಎನ್‌ಇಪಿ) ಜಾರಿಯಲ್ಲಿ ಸರ್ಕಾರ ಕಾರ್ಯೋನ್ಮುಖವಾಗಿದೆ ಎಂದು ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವ ಬಿ.ಸಿ.ನಾಗೇಶ್ ಹೇಳಿದರು.

ಸೋಮವಾರ ವಿದ್ಯಾಭಾರತಿ ಕರ್ನಾಟಕ ಮತ್ತು ಸಿಎಮ್‌ಆರ್ ಸಮೂಹ ಸಂಸ್ಥೆ ಆಯೋಜಿಸಿದ್ದ ಕರ್ನಾಟಕದ ಶಾಲಾ ಶಿಕ್ಷಣದಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ 2020ರ ಅನುಷ್ಠಾನ-ಅವಕಾಶಗಳು ಮತ್ತು ಕಾರ್ಯತಂತ್ರಗಳು ಕುರಿತ ಎರಡು ದಿನಗಳ ರಾಜ್ಯ ಮಟ್ಟದ ವಿಚಾರ ಸಂಕಿರಣವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕೇಂದ್ರ ಸರ್ಕಾರದ ಹೊಸ ರಾಷ್ಟ್ರೀಯ ಶಿಕ್ಷಣ ನೀತಿ ಜಾರಿಗೆ ಕರ್ನಾಟಕ ಸರ್ಕಾರ ಸಜ್ಜಾಗಿದೆ. ನೀತಿ ಜಾರಿಗೆ ಪೂರಕವಾಗಿ ರಾಜ್ಯದ ಶಿಕ್ಷಣ ತಜ್ಞರು, ಶಿಕ್ಷಣ ಸಂಸ್ಥೆಗಳು ಸೇರಿದಂತೆ ಅನೇಕ ಸಂಘ-ಸಂಸ್ಥೆಗಳಿಂದ ಮಾಹಿತಿ, ಸಲಹೆಗಳ ಸಂಗ್ರಹಕ್ಕೆ ಮುಂದಾಗಿದ್ದು, ರಾಜ್ಯದ ಸಮಗ್ರ ಸಲಹೆಗಳನ್ನು ಕೇಂದ್ರಕ್ಕೆ ಕಳುಹಿಸುವ ಅಮೂಲಾಗ್ರ ಕೆಲಸವನ್ನು ರಾಜ್ಯದ ಶಿಕ್ಷಣ ಸಚಿವನಾಗಿ ಮಾಡುತ್ತೇನೆ. ಈ ನಿಟ್ಟಿನಲ್ಲಿ ರಾಜ್ಯದ ಶಿಕ್ಷಣ ತಜ್ಞರ ಸಲಹೆ, ಸಹಕಾರವನ್ನು ಬಯಸುತ್ತೇನೆ ಎಂದು ಸಚಿವರು ತಿಳಿಸಿದರು.

**ನಾಗರಿಕರ ಜವಾಬ್ದಾರಿಯೂ ಅಗತ್ಯ:** ರಾಜ್ಯಸಭಾ ಸದಸ್ಯ ಕೆ.ಸಿ ರಾಮಮೂರ್ತಿ ಮಾತನಾಡಿ, ದೇಶಕ್ಕೆ ಸಂಬಂಧ ಪಟ್ಟಂತಹ ಏಕರೂಪದ ಶಿಕ್ಷಣ ನೀತಿ ಇರಲಿಲ್ಲ, ಈ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ದೇಶದ ಆರ್ಥಿಕ, ಸಾಮಾಜಿಕ ಅನುಗುಣವಾಗಿ ಹೊಸ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ರೂಪಿಸಲು ಮುಂದಾಗಿದೆ. ಈ ಹೊಸ ಶಿಕ್ಷಣ ನೀತಿ ಗ್ರಾಮೀಣ ಮತ್ತು ನಗರ ಶಿಕ್ಷಣದಲ್ಲಿ ಸಮನ್ವಯತೆ ಮತ್ತು ಸಮಗ್ರತೆಯನ್ನು ರೂಪಿಸಲು ಸಹಕಾರಿಯಾಗಲಿದೆ. ರಾಷ್ಟ್ರೀಯ ಶಿಕ್ಷಣ ನೀತಿಯನ್ನು ರೂಪಿಸುವ ಧ್ಯೇಯ ಪ್ರತಿಯೊಬ್ಬ ನಾಗರೀಕರ ಜವಾಬ್ದಾರಿಯಾಗಬೇಕು. ಈ ನಿಟ್ಟಿನಲ್ಲಿ ವಿದ್ಯಾಭಾರತಿ ಸಂಸ್ಥೆಯ ಸಹಯೋಗದಲ್ಲಿ ನಮ್ಮ ವಿದ್ಯಾಸಂಸ್ಥೆಯಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ ಜಾರಿ ಕುರಿತು ವಿಚಾರ ಸಂಕಿರಣ ನಡೆಯುತ್ತಿರುವುದು ಅತ್ಯಂತ ಸಂತೋಷದ ವಿಚಾರ ಎಂದರು.



### ಗಾಂಧೀಜಿ ಆಶಯದಂತೆ ಎನ್‌ಇಪಿ

ಎನ್‌ಇಪಿ ಸಲಹಾ ಸಮಿತಿ ಸದಸ್ಯ ಪ್ರೊ. ಎಂ.ಕೆ.ಶ್ರೀಧರ್ ಮಾತನಾಡಿ, ಸ್ವತಂತ್ರ ಪೂರ್ವದಲ್ಲಿಯೇ ಭಾರತದಲ್ಲಿ ಸ್ವಾವಲಂಬಿ, ಸ್ವಾಭಿಮಾನಿ ಸಮಗ್ರ ಶಿಕ್ಷಣ ಗುರುಕುಲ ಪದ್ಧತಿಯಲ್ಲಿತ್ತು. ಸ್ವಾತಂತ್ರ್ಯ ಬಂದ ನಂತರ ಶಿಕ್ಷಣ ಕ್ಷೇತ್ರದಲ್ಲಿ ಆಮೂಲಾಗ್ರ ಬದಲಾವಣೆ ತರುವ ನಿಟ್ಟಿನಲ್ಲಿ ಸಾಕಷ್ಟು ಪ್ರಯತ್ನಗಳಾಗಲಿಲ್ಲ. ದೇಶಕ್ಕೆ ಸ್ವಾತಂತ್ರ್ಯ ಬಂದು 75 ವರ್ಷಗಳಾದ ಈ ಅಮೃತ ಮಹೋತ್ಸವದ ಸಂದರ್ಭದಲ್ಲಿ ದೇಶಕ್ಕೆ ಏಕರೂಪದ ರಾಷ್ಟ್ರೀಯ ಶಿಕ್ಷಣ ನೀತಿ ರೂಪಿಸುವುದು ಅತ್ಯಗತ್ಯವಾದ ಕೆಲಸ. ಗಾಂಧೀಜಿಯವರ ಗ್ರಾಮ ಸ್ವರಾಜ್ಯದ ಆಶಯದಂತೆ ರಾಷ್ಟ್ರೀಯ ಶಿಕ್ಷಣ ರೂಪಿಸಿ ದೇಶಕ್ಕೆ ಸ್ವಂತಿಕೆಯ ಶಿಕ್ಷಣ ನೀಡುವ ನಿಟ್ಟಿನಲ್ಲಿ ನಾವೆಲ್ಲರು ಒಂದಾಗಿ ಕೆಲಸ ಮಾಡಬೇಕೆಂದು ಸಲಹೆ ನೀಡಿದರು.

ವಿದ್ಯಾಭಾರತಿ ರಾಷ್ಟ್ರೀಯ ಅಧ್ಯಕ್ಷ ದೂಸಿ ರಾಮಕೃಷ್ಣ ರಾವ್, ವಿದ್ಯಾಭಾರತಿ ಕರ್ನಾಟಕ ಅಧ್ಯಕ್ಷ ಪರಮೇಶ್ವರ ಹೆಗಡೆ, ಆರ್‌ಎಸ್‌ಎಸ್ ದಕ್ಷಿಣ ಮಧ್ಯ ಕ್ಷೇತ್ರೀಯ ಕಾರ್ಯವಾಹ ನಾ.ತಿಪ್ಪೇಸ್ವಾಮಿ ಮತ್ತಿತರರಿದ್ದರು.

**Publication: Vartha Prabha**
**Date: 07-09-2021**

# ರಾಷ್ಟ್ರೀಯ ಶಿಕ್ಷಣ ನೀತಿ–2020ರ ಅನುಷ್ಠಾನ ಅವಕಾಶಗಳು ಹಾಗೂ ಕಾರ್ಯತಂತ್ರಗಳು ವಿಷಯ ಕುರಿತ ಎರಡು ದಿನದ ವಿಚಾರ ಸಂಕಿರಣ



ವಿದ್ಯಾಭಾರತಿ ಕರ್ನಾಟಕ ಮತ್ತು ಸಿ.ಎಂ.ಆರ್ ಸಮೂಹ ಶಿಕ್ಷಣ ಸಂಸ್ಥೆಗಳ ಸಹಯೋಗದಲ್ಲಿ ಕರ್ನಾಟಕದ ಶಾಲಾ ಶಿಕ್ಷಣದಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ–2020ರ ಅನುಷ್ಠಾನ–ಅವಕಾಶಗಳು ಹಾಗೂ ಕಾರ್ಯತಂತ್ರಗಳು ವಿಷಯ ಕುರಿತ ಎರಡು ದಿನದ ವಿಚಾರ ಸಂಕಿರಣ.

ವಿದ್ಯಾಭಾರತಿ ಕರ್ನಾಟಕ ಮತ್ತು ಸಿ.ಎಂ.ಆರ್ ಸಮೂಹ ಶಿಕ್ಷಣ ಸಂಸ್ಥೆಗಳು ಇವರ ಸಹಯೋಗದಲ್ಲಿ ನಗರದ ಸಿ.ಎಂ.ಆರ್ ತಾಂತ್ರಿಕ ಮಹಾವಿದ್ಯಾಲಯದ ಸಭಾಂಗಣದಲ್ಲಿ "ಕರ್ನಾಟಕ ಶಾಲಾ ಶಿಕ್ಷಣದಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ–2020ರ ಅನುಷ್ಠಾನ–ಅವಕಾಶಗಳು ಹಾಗೂ ಕಾರ್ಯತಂತ್ರಗಳು" ವಿಷಯ ಕುರಿ ತಂತೆ ಮೊದಲ ದಿನದ ವಿಚಾರ ಸಂಕಿರಣ ಜರುಗಿತು.

ಈ ವಿಚಾರ ಸಂಕಿರಣವನ್ನು ಕರ್ನಾಟಕ ಸರ್ಕಾರದ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರಾದ ಬಿ.ಸಿ ನಾಗೇಶ್ ಅವರು ಉದ್ಘಾಟಿಸಿದರು. ವಿಚಾರ ಸಂಕಿರಣದ ದಿಕ್ಸೂಚಿ ಭಾಷಣಕಾರರಾಗಿ ಪ್ರೊ. ಎಂ.ಕೆ.ಶ್ರೀಧರ್, (ಸದಸ್ಯರು,ರಾಷ್ಟ್ರೀಯ ಶಿಕ್ಷಣ ನೀತಿ ಸಲಹಾ ಸಮಿತಿ ಮತ್ತು ಸದಸ್ಯರು, ವಿಶ್ವವಿದ್ಯಾಲಯ ಅನುದಾನ ಆಯೋಗ) ಭಾಗವಹಿಸಿದ್ದರು. ವಿಚಾರ ಸಂಕಿರಣದ ಅಧ್ಯಕ್ಷತೆಯನ್ನು ಶ್ರೀ ದೂಸಿ ರಾಮಕೃಷ್ಣ ರಾವ್, ರಾಷ್ಟ್ರೀಯ ಅಧ್ಯಕ್ಷರು, ವಿದ್ಯಾಭಾರತಿ ಇವರು ವಹಿಸಿದ್ದರು. ವಿಚಾರ ಸಂಕಿರಣದ ಮುಖ್ಯ ಅತಿಥಿಗಳಾಗಿ ಶ್ರೀ ಕೆ.ಸಿ.ರಾಮಮೂರ್ತಿ ರಾಜ್ಯಸಭಾ ಸದಸ್ಯರು ಹಾಗೂ ಅಧ್ಯಕ್ಷರು ಸಿ.ಎಂ.ಆರ್ ಶಿಕ್ಷಣ ಸಮೂಹ ಸಂಸ್ಥೆಗಳು ಇವರು ಭಾಗ ವಹಿಸಿದ್ದರು.

ವಿಚಾರ ಸಂಕಿರಣವನ್ನು ಉದ್ಘಾಟಿಸಿ ಮಾತನಾಡಿದ ಕರ್ನಾಟಕ ಸರ್ಕಾರದ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರಾದ ಬಿ.ಎಸ್ ನಾಗೇಶ್ ರವರು ಕೇಂದ್ರ ಸರ್ಕಾರದ ಹೊಸ ರಾಷ್ಟ್ರೀಯ ಶಿಕ್ಷಣ ನೀತಿಯ ಅನುಷ್ಠಾನಕ್ಕೆ ಕರ್ನಾಟಕ ಸರ್ಕಾರ ಸಜ್ಜಾಗಿದ್ದು ಈ ನಿಟ್ಟಿನಲ್ಲಿ ಕಾರ್ಯನ್ಮೊಕರಾಗಿದ್ದೇವೆ ಎಂದರು. ರಾಷ್ಟ್ರೀ ಯ ಶಿಕ್ಷಣ ನೀತಿ ಜಾರಿಗೆ ಪೂರಕವಾಗಿ ರಾಜ್ಯದ ಶಿಕ್ಷಣ ತಜ್ಞರು, ಶಿಕ್ಷಣ ಸಂಸ್ಥೆಗಳು ಸೇರಿದಂತೆ ಅನೇಕ ಸಂಘ–ಸಂಸ್ಥೆಗಳಿಂದ ಮಾಹಿತಿ, ಸಲಹೆಗಳ ಸಂಗ್ರಹಕ್ಕೆ ಮುಂ ದಾಗಿದ್ದು, ರಾಜ್ಯದ ಸಮಗ್ರ ಸಲಹೆಗಳನ್ನು ಕೇಂದ್ರಕ್ಕೆ ಕಳುಹಿಸುವ ಅಮೂಲಾಗ್ರ ಕೆಲಸವನ್ನು ರಾಜ್ಯದ ಶಿಕ್ಷಣ ಸಚಿವನಾಗಿ ಮಾಡುತ್ತೇನೆ. ಈ ನಿಟ್ಟಿನಲ್ಲಿ ರಾಜ್ಯದ ಶಿಕ್ಷಣ ತಜ್ಞರ ಸಲಹೆ, ಸಹಕಾರವನ್ನು ಬಯಸುತ್ತೇನೆ ಎಂದು ತಿಳಿಸಿದರು.

ವಿಚಾರ ಸಂಕಿರಣದ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ರಾಜ್ಯಸಭಾ ಸದಸ್ಯರು ಹಾಗೂ ಸಿ.ಎಂ.ಆರ್ ಸಮೂಹ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷರಾದ ಶ್ರೀ ಕೆ.ಸಿ ರಾಮಮೂರ್ತಿಯವರು ಮಾತನಾಡಿ ಇದುವರೆಗೂ ಇಡೀ ದೇಶಕ್ಕೆ ಸಂಬಂಧ ಪಟ್ಟಂತಹ ಏಕರೂಪದ ಶಿಕ್ಷಣ ನೀತಿ ಇರಲಿಲ್ಲ. ಈ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ದೇಶದ ಆರ್ಥಿಕ, ಸಾಮಾಜಿಕ ಅನುಗುಣವಾಗಿ ಹೊಸ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ರೂಪಿಸಲು ಮುಂದಾಗಿದ್ದು ಈ ಹೊಸ ಶಿಕ್ಷಣ ನೀತಿ ಗ್ರಾಮೀಣ ಮತ್ತು ನಗರ ಶಿಕ್ಷಣದಲ್ಲಿ ಸಮನ್ವಯತೆ ಮತ್ತು ಸಮಗ್ರತೆಯನ್ನು ರೂಪಿಸಲು ಸಹಕಾರಿಯಾಗಲಿದೆ ಎಂದರು.

➡2

**Publication: Prajavani**
**Date: 07-09-2021**

ಪ್ರಜಾವಾಣಿ

# 'ಏಕರೂಪ ರಾಷ್ಟ್ರೀಯ ಶಿಕ್ಷಣ ನೀತಿ ರೂಪಿಸುವುದು ಅಗತ್ಯ'

ಬೆಂಗಳೂರು: 'ಸ್ವಾತಂತ್ರ್ಯ ಅಮೃತ ಮಹೋತ್ಸವದ ಹೊತ್ತಿನಲ್ಲಿ ದೇಶಕ್ಕೆ ಏಕರೂಪದ ರಾಷ್ಟ್ರೀಯ ಶಿಕ್ಷಣ ನೀತಿ ರೂಪಿಸುವುದು ಅತ್ಯಗತ್ಯ' ಎಂದು ರಾಷ್ಟ್ರೀಯ ಶಿಕ್ಷಣ ನೀತಿ ಸಲಹಾ ಸಮಿತಿ ಸದಸ್ಯ ಎಂ.ಕೆ.ಶ್ರೀಧರ್ ಅಭಿಪ್ರಾಯಪಟ್ಟರು.

ವಿದ್ಯಾಭಾರತಿ ಕರ್ನಾಟಕ ಮತ್ತು ಸಿ.ಎಂ.ಆರ್.ಸಮೂಹ ಶಿಕ್ಷಣ ಸಂಸ್ಥೆಗಳ ಸಹಯೋಗದಲ್ಲಿ ಹಮ್ಮಿಕೊಂಡಿರುವ 'ಕರ್ನಾಟಕದ ಶಾಲಾ ಶಿಕ್ಷಣದಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ–2020ರ ಅನುಷ್ಠಾನ: ಅವಕಾಶಗಳು ಹಾಗೂ ಕಾರ್ಯತಂತ್ರಗಳು' ಕುರಿತ ವಿಚಾರ ಸಂಕಿರಣದಲ್ಲಿ ಸೋಮವಾರ ಮಾತನಾಡಿದರು.

'ಸ್ವಾತಂತ್ರ್ಯ ಬಂದ ನಂತರ ಶಿಕ್ಷಣ ಕ್ಷೇತ್ರದಲ್ಲಿ ಆಮೂಲಾಗ್ರ ಬದಲಾವಣೆ ತರುವ ನಿಟ್ಟಿನಲ್ಲಿ ಸಾಕಷ್ಟು ಪ್ರಯತ್ನಗಳು ನಡೆಯಲಿಲ್ಲ' ಎಂದರು.

ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವ ಬಿ.ಸಿ.ನಾಗೇಶ್, 'ಪ್ರಾಥಮಿಕ ಮತ್ತು ಪ್ರೌಢಶಾಲಾ ಹಂತದಲ್ಲಿ ನೂತನ ರಾಷ್ಟ್ರೀಯ ಶಿಕ್ಷಣ ನೀತಿ ಅನುಷ್ಠಾನಗೊಳಿಸಲು ರಾಜ್ಯ ಸರ್ಕಾರ ಬದ್ಧವಾಗಿದೆ. ಈ ಸಂಬಂಧ ಶಿಕ್ಷಣ ತಜ್ಞರು, ಶಿಕ್ಷಣ ಸಂಸ್ಥೆಗಳು ಹಾಗೂ ಸಂಘ ಸಂಸ್ಥೆಗಳ ಸಲಹೆಗಳನ್ನು ಪಡೆದು ಮುಂದಡಿ ಇಡುತ್ತೇವೆ' ಎಂದು ಹೇಳಿದರು.

ರಾಜ್ಯಸಭಾ ಸದಸ್ಯ ಕೆ.ಸಿ.ರಾಮಮೂರ್ತಿ, 'ನೂತನ ರಾಷ್ಟ್ರೀಯ ಶಿಕ್ಷಣ ನೀತಿಯು ಗ್ರಾಮೀಣ ಹಾಗೂ ನಗರ ಶಿಕ್ಷಣದಲ್ಲಿ ಸಮನ್ವಯತೆ ಮತ್ತು ಸಮಗ್ರತೆ ತರಲು ನೆರವಾಗಲಿದೆ' ಎಂದರು.

ವಿದ್ಯಾಭಾರತಿ ಕರ್ನಾಟಕದ ಅಧ್ಯಕ್ಷ ದೂಸಿ ರಾಮಕೃಷ್ಣ ರಾವ್ 'ರಾಷ್ಟ್ರೀಯ ಶಿಕ್ಷಣ ನೀತಿಯಿಂದ ದೇಶದಲ್ಲಿ ಆಮೂಲಾಗ್ರ ಬದಲಾವಣೆ ಸಾಧ್ಯ' ಎಂದು ತಿಳಿಸಿದರು.